# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 223/2024**

**ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 19-02-2026 ರಂದು ಪ್ರಮಾಣ ಮಾಡಿಸಲಾಯಿತು**

| | | | |
|---|---|---|---|
| **ಸಾಕ್ಷಿಯ ಹೆಸರು** | ಃ | ಪರಶುರಾಮ ಚವಾಣ | **ಪ್ರಾ.ಸಾ ಃ 03** |
| **ತಂದೆ ಃ ಗಂಡ ಹೆಸರು** | ಃ | ಪ್ರೇಮನಾಥ | **ಚಾ.ಸಾ ಃ 05** |
| **ವಯಸ್ಸು** | ಃ | 24 ವರ್ಷ | |
| **ಉದ್ಯೋಗ** | ಃ | ಚಾಲಕ | |
| **ವಾಸಸ್ಥಳ** | ಃ | ತುಮರಿಕೊಪ್ಪ | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ಚಾಸಾ-1 ನನ್ನ ತಾಯಿ. ಚಾಸಾ-2 ರಿಂದ 4, 6 ರಿಂದ 15 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ.

ಸುಮಾರು ಎರಡು ವರೆ ವರ್ಷಗಳ ಹಿಂದೆ ಹೋಳಿ ಇದ್ದುದರಿಂದ ಆರೋಪಿತರು ಬಣ್ಣ ಆಡುತ್ತಿದ್ದರು. ಚಾಸಾ-4 ಮತ್ತು ಆರೋಪಿತರ ಮದ್ಯ ಅಂಗಡಿ ಹತ್ತಿರ ಜಗಳ ಆಗಿದ್ದು, ಅಲ್ಲಿ ನಮ್ಮ ಮಾವ ಮುದಕಪ್ಪ ಕುಳಿತಿದ್ದ. ಆರೋಪಿತರು ಚಾಸಾ-4 ರವರಿಗೆ ಹೊಡೆಯುವಾಗ ಸದರಿಯವರು ಬಿಡಿಸಲು ಹೋಗಿದ್ದು ಒಬ್ಬರಿಗೊಬ್ಬರು ಹೊಡೆದಾಡಿಕೊಳ್ಳುತ್ತಿದ್ದರು. ನಾನು, ಚಾಸಾ-1, ಚಾಸಾ-6, 7, 9, 11 ರವರು ಜಗಳ ಬಿಡಿಸಲು ಹೋಗಿದ್ದೆವು. ಅಲ್ಲಿಂದ ಪುನಃ ಚರ್ಚ ಹತ್ತಿರ ಹೋಗಿ ಅಲ್ಲಿ ಕಲ್ಲುಗಳನ್ನು ಎಸೆಯುತ್ತಿದ್ದರು. ಜಗಳದಲ್ಲಿ ನನ್ನ ಎಡಗಾಲಿಗೆ ಕಲ್ಲು ಎಸೆದಿದ್ದರಿಂದ ರಕ್ತಗಾಯವಾಗಿರುತ್ತದೆ. ನನ್ನನ್ನು ಒಂದು ವಾಹನದಲ್ಲಿ ಕಲಘಟಗಿ ಸರಕಾರಿ ಆಸ್ಪತ್ರೆಗೆ ದಾಖಲಿಸಿರುತ್ತಾರೆ. ಜಗಳದಲ್ಲಿ ನಮ್ಮ ಮಾವ ಚಾಸಾ-9 ರವರ ಕೈಗೆ ಪೆಟ್ಟಾಗಿರುತ್ತದೆ. ಚಾಸಾ-6 ರವರ ತಲೆಯ ಹಿಂಬಾಗದಲ್ಲಿ ಪೆಟ್ಟಾಗಿರುತ್ತದೆ. ಈ ಬಗ್ಗೆ ಚಾಸಾ-1 ರವರು ಪೋಲೀಸರಿಗೆ ದೂರು ನೀಡಿರುತ್ತಾರೆ. ಘಟನೆ ಬಗ್ಗೆ ಪೋಲೀಸರು ವಿಚಾರಿಸಿದ್ದು ಈ ಬಗ್ಗೆ ಹೇಳಿಕೆ ನೀಡಿರುತ್ತೇನೆ. ಜಗಳ ಮಾಡಿ ಹಲ್ಲೆ ಮಾಡಿದ ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ. ಹಲ್ಲೆಗೆ ಉಪಯೋಗಿಸಿದ ಬಡಿಗೆಗಳು ಹಾಗೂ ಕಲ್ಲುಗಳನ್ನು ನೋಡಿದರೆ ಗುರುತಿಸುತ್ತೇನೆ. ಮುದ್ದೆಮಾಲು-1 ಮತ್ತು 2 ನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ.

***(ಮಾನ್ಯ ಸ.ಸ.ಅ ಯವರ ವಿನಂತಿ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ,*** *ಪಾಟೀ ಸವಾಲಿಗೆ ಅನುಮತಿಸಿದೆ)*

**ಪಾಟೀ ಸವಾಲುಃ ಮಾನ್ಯ ಸ.ಸ.ಅ. ರವರಿಂದಃ**

ದಿನಾಂಕ 07.03.2023 ರಂದು ಸಾಯಂಕಾಲ 6-30 ಕ್ಕೆ ಜಗಳ ಆಗಿರುತ್ತದೆ ಅಂದರೆ ನಿಜ. ಚಾಸಾ-4 ರವರು ಆರೋಪಿತರಿಗೆ ಬಣ್ಣ ಹಾಕಬೇಡರಿ ಎಂದು ಹೇಳಿದರೂ ಕೂಡಾ ಸದರಿಯವರ ಮೇಲೆ ಬಣ್ಣ ಹಾಕಿರುತ್ತಾರೆ ಅಂದರೆ ನಿಜ. 2 ರಿಂದ 9 ನೇ ಆರೋಪಿತರು 1 ನೇ ಆರೋಪಿ ಜೊತೆಗೆ ಬಂದಿದ್ದು ಚಾಸಾ-4 ರವರ ಜೊತೆಗೆ ಜಗಳ ಮಾಡಿ ಕೈಯಿಂದ ಹೊಡಿ ಬಡಿ ಮಾಡಿರುತ್ತಾರೆ ಅಂದರೆ ನಿಜ. ಚಾಸಾ-1, 5 ರಿಂದ 15 ರವರು ಸ್ಥಳಕ್ಕೆ ಬಂದು

ಜಗಳ ಬಿಡಿಸಿರುತ್ತಾರೆ ಅಂದರೆ ನಿಜ. ಆರೋಪಿತರು ಜಗಳ ಬಿಡಿಸಲು ಬಂದವರೆಗೆ ನಿಮಗೆನೂ ಸಂಬಂಧ ಜಗಳ ಬಿಡಿಸಲು ನೀವು ಏಕೆ ಬಂದಿದ್ದಿರಿ ಎಂದು ಅವರ ಜೊತೆಗೂ ಜಗಳ ಮಾಡಿರುತ್ತಾರೆ ಅಂದರೆ ನಿಜ. ಚಾಸಾ-8 ರವರು ಜಗಳ ಬಿಡಿಸಲು ಬಂದಾಗ 1 ನೇ ಆರೋಪಿಯು ಕಲ್ಲಿನಿಂದ ಚಾಸಾ-8 ರವರ ತಲೆಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. 2 ನೇ ಆರೋಪಿ ಕೂಡಾ ಚಾಸಾ-8 ರವರ ಮೇಲೆ ಕಲ್ಲಿನಿಂದ ಹಲ್ಲೆ ಮಾಡಿರುತ್ತಾರೆ ಅಂದರೆ ನಿಜ. ಆ ಸಮಯದಲ್ಲಿ 1 ನೇ ಆರೋಪಿ ಚಾಸಾ-8 ರವರಿಗೆ ನಿನಗೆ ಸೊಕ್ಕು ಬಹಳ ಇದೆ ಸೂಳೆಮಗನೆ ಎಂದು ತನ್ನ ಕೈಯಲ್ಲಿದ್ದ ಕಲ್ಲಿನಿಂದ ಎದೆಗೆ ಹೊಡೆದಿರುತ್ತಾನೆ ಅಂದರೆ ನಿಜ. 2 ನೇ ಆರೋಪಿ ಜಗಳ ಬಿಡಿಸಲು ಬಂದ ಚಾಸಾ-5 ರವರಿಗೆ ಕಲ್ಲಿನಿಂದ ಕಾಲಿಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. ಚಾಸಾ-6 ರವರ ತಲೆಗೆ 2 ನೇ ಆರೋಪಿ ಕಲ್ಲಿನಿಂದ ತಲೆಗೆ ಹೊಡೆದು ರಕ್ತಗಾಯ ಪಡಿಸಿರುತ್ತಾನೆ ಅಂದರೆ ನಿಜ. ಉಳಿದ ಆರೋಪಿತರು ತಮ್ಮ ಕೈಗಳಿಂದ ಹೊಡಿ ಬಡಿ ಮಾಡಿರುತ್ತಾರೆ ಅಂದರೆ ನಿಜ. 2 ನೇ ಆರೋಪಿ ಚಾಸಾ-1 ರವರ ಸೀರೆ ಹಿಡಿದು ಎಳೆದಾಡಿ ಸಾರ್ವಜನಿಕವಾಗಿ ಮಾನಭಂಗ ಮಾಡಿರುತ್ತಾನೆ ಹಾಗೂ ಅವಾಚ್ಯ ಶಬ್ದಗಳಿಂದ ಬೈದಿರುತ್ತಾನೆ ಅಂದರೆ ನಿಜ. ಚಾಸಾ-11 ರವರಿಗೆ 1 ನೇ ಆರೋಪಿ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. ಉಳಿದ ಆರೋಪಿತರು ತಮ್ಮ ಕೈಯಿಂದ, ಬಡಿಗೆಯಿಂದ ಚಾಸಾ-7 ರವರಿಗೆ ಮೈಕೈಗಳಿಗೆ ಹಲ್ಲೆ ಮಾಡಿರುತ್ತಾರೆ ಅಂದರೆ ನಿಜ. 3 ನೇ ಆರೋಪಿಯು ಚಾಸಾ-9 ರವರ ಮೇಲೆ ಬಡಿಗೆಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 4 ನೇ ಆರೋಪಿ ಬಡಿಗೆಯಿಂದ ಚಾಸಾ-10 ರವರ ಮೇಲೆ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 7 ನೇ ಆರೋಪಿಯು ಚಾಸಾ-13 ರವರಿಗೆ ತನ್ನ ಕೈಯಲ್ಲಿದ್ದ ಬಡಿಗೆ ಹಾಗೂ ಕೈಯಿಂದ ಹಲ್ಲೆ ಮಾಡಿರುತ್ತಾನೆ ಅಂದರೆ ನಿಜ. 5 ಮತ್ತು 6 ನೇ ಆರೋಪಿತರು ತಮ್ಮ ಕೈಯಲ್ಲಿ ಇದ್ದ ಬಡಿಗೆಯಿಂದ ಚಾಸಾ-12 ರವರಿಗೆ ಕೈಗಳಿಂದ ಮತ್ತು ಬಡಿಗೆಗಳಿಂದ ಹೊಡೆದು ಗಾಯ ಪಡಿಸಿರುತ್ತಾರೆ ಅಂದರೆ ನಿಜ. 1 ಮತ್ತು 2 ನೇ ಆರೋಪಿತರು ಚಾಸಾ-1 ರವರ ಮೈಮೇಲೆ ಹಲ್ಲೆ ಮಾಡಿ ಸೀರೆ ಹಿಡಿದು ಎಳೆದಾಡಿ ಮಾನಭಂಗ ಮಾಡಿರುತ್ತಾರೆ ಅಂದರೆ ನಿಜ. ಆರೋಪಿತರು ಅವಾಚ್ಯ ಶಬ್ದಗಳಿಂದ ಬೈಯುತ್ತಿದ್ದರು ಅಂದರೆ ನಿಜ. ಚಾಸಾ-5 ರಿಂದ 15 ರವರು ಜಗಳ ಬಿಡಿಸಿ ಹೋಗುವಾಗ ಆರೋಪಿತರು ಈಗ ಉಳಿದುಕೊಂಡಿದ್ದಿರಿ ಇನ್ನೊಮ್ಮೆ ಸಿಕ್ಕರೆ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿರುತ್ತಾರೆ ಅಂದರೆ ನಿಜ.

**ಪಾಟೀ ಸವಾಲುಃ ಆರೋಪಿತರ ಪರಃ**

ಪಾಟೀ ಸವಾಲಿಗೆ ಕಾಲಾವಕಾಶ ಕೋರುತ್ತಿದ್ದು ಕಾಲಾವಕಾಶ ನೀಡಲಾಯಿತು.

**ಮರು ವಿಚಾರಣೆಃ** ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೆ ಸರಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು,**
**ಕಲಘಟಗಿ.**